ಈ) 151 ಅಭ್ಯರ್ಥಿಗಳ ಪೈಕಿ 140 ಅಭ್ಯರ್ಥಿಗಳನ್ನು ವಿಚಾರಿಸಲಾಗಿದೆ ಉಳಿದ ಅಭ್ಯರ್ಥಿಗಳನ್ನು ಪತ್ತೆ ಮಾಡಬೇಕಾಗಿರುವುದರಿಂದ ಮತ್ತು ವಿಚಾರಣೆಗೋಸ್ಕರ ಇನ್ನು ಹೆಚ್ಚು ಮಾಹಿತಿ ಸಂಗ್ರಹಿಸಬೇಕಾಗಿರುವುದರಿಂದ ತನಿಖೆ ವಿಳಂಬವಾಗಿದೆ

ಇಲಾಖೆಯ ಅಧಿಕಾರಿಗಳು ಭಾಗಿಯಾಗಿರುವ ಬಗ್ಗೆ ತನಿಖಾ ವರದಿ ಬಂದಿರುವುದಿಲ್ಲ ಯಾವುದೇ ಅಧಿಕಾರಿಗಳು ತಪ್ಪಿತಸ್ಥರೆಂದು ವರದಿಯಾಗಿರುವುದಿಲ್ಲದ ಕಾರಣ ಬಡ್ತಿ ನೀಡಿ ರಿಕ್ತ ಸ್ಥಾನಗಳಲ್ಲಿ ಅದೇ ಸ್ಥಳಗಳಲ್ಲಿ ಮುಂದುವರಿಸಲಾಗಿದೆ

ಉ) ಇಲ್ಲ

631 (915) ಶ್ರೀ ಗಡ್ಡದೇವರಮರ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ) – ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಶಿರಹಟ್ಟಿಯ ಮತಕ್ಷೇತ್ರದ ಯಳವತ್ತಿಯ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಕಟ್ಟಡದ ಅಂದಾಜು ಮೊತ್ತ ಎಷ್ಟು ,

ಆ) ಈ ಕಾಮಗಾರಿಯನ್ನು ಯಾರಿಗೆ ವಹಿಸಲಾಗಿದೆ ,

ಇ) ಈ ಕಾಮಗಾರಿಗಾಗಿ ಇಲ್ಲಿಯವರೆಗೆ ವಿನಿಯೋಗಿಸಲಾದ ಹಣ ಎಷ್ಟು

ಈ) ಕಾಮಗಾರಿಯು ಈಗ ಯಾವ ಹಂತದಲ್ಲಿದೆ ,

ಉ) ಕಾಮಗಾರಿಯನ್ನು ಪೂರ್ಣಗೊಳಿಸಲು ನಿಗಧಿ ಪಡಿಸಲಾದ ಕಾಲಾವದಿ ಎಷ್ಟು ?

ಶ್ರೀ ಆರ್ ಅಶೋಕ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) –

ಅ) ಶಿರಹಟ್ಟಿಯ ಮತಕ್ಷೇತ್ರದ ಯಳವತ್ತಿಯ ಆರೋಗ್ಯ ಕೇಂದ್ರಕ್ಕೆ ಮಂಜೂರಾದ ಕಟ್ಟಡಕ್ಕೆ ಅಂದಾಜು ಮೊತ್ತ 34 26 ಲಕ್ಷ ರೂ ಗಳು ಮಂಜೂರಾಗಿರುತ್ತದೆ

ಆ) ಈ ಕಾಮಗಾರಿಯನ್ನು ಗದಗ ಜಿಲ್ಲೆಯ ಕಾರ್ಯನಿರ್ವಾಹಕ ಅಭಿಯಂತರ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗಕ್ಕೆ ವಹಿಸಲಾಗಿದೆ

ಇ) ಇಲ್ಲಿಯವರೆಗೆ ರೂ 10 24 ಲಕ್ಷ ಹಣ ವಿನಿಯೋಗಿಸಲಾಗಿದೆ

ಈ) ಪ್ಲಿಂತ್ ಹಂತದವರೆಗೆ ಕೆಲಸ ಆಗಿರುತ್ತದೆ

ಉ) 12 ತಿಂಗಳು (ಮಳೆಗಾಲ ಸೇರಿ)

ವಸತಿ ನಿಲಯಗಳಲ್ಲಿ ಪ್ರವೇಶಾವಕಾತವನ್ನು ಹೆಚ್ಚಿಸುವುದು

632 (916) ಶ್ರೀ ಗಡ್ಡದೇವರಮರ್ ಗಡ್ಡಯ್ಯ ಶಿವಮೂರ್ತಯ್ಯ (ಶಿರಹಟ್ಟಿ) – ಸಮಾಜ ಕಲ್ಯಾಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ ?

ಅ) ಶಿರಹಟ್ಟಿ ಮತಕ್ಷೇತ್ರದಲ್ಲಿ ಇರುವ ಒಟ್ಟು ವಸತಿ ನಿಲಯಗಳೆಷ್ಟು

ಆ) ಹಿಂದುಳಿದ ವರ್ಗಗಳ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯ ವಿವರ ನೀಡುವುದು ,

ಇ) ಪ್ರತಿ ವಸತಿ ನಿಲಯಕ್ಕೆ ಮಂಜೂರಾದ ಪ್ರವೇಶ ಸಂಖ್ಯೆ ಎಷ್ಟು ,

ಈ) ಪ್ರತಿ ವಸತಿ ನಿಲಯಕ್ಕೆ ಪ್ರವೇಶ ಕೋರಿ ಬಂದ ವಿದ್ಯಾರ್ಥಿಗಳೆಷ್ಟು ,

ಉ) ಮಂಜೂರಾದ ಸಂಖ್ಯೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಬೇಡಿಕೆ ಇದ್ದು ಪ್ರವೇಶ ದೊರಕದೆ ಅನೇಕ ಬಡ ವಿದ್ಯಾರ್ಥಿಗಳು ವಿದ್ಯಾಭ್ಯಾಸವನ್ನು ಮೊಟಕು ಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ,

ಊ) ಬಂದಿದ್ದಲ್ಲಿ, ಬಡ ವಿದ್ಯಾರ್ಥಿಗಳ ಬೇಡಿಕೆಗೆ ಅನುಗುಣವಾಗಿ ವಸತಿ ನಿಲಯಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವೇಶ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೆ ?

ಶ್ರೀ ಬಾಲಚಂದ್ರ ಲ ಜಾರಕಿ ಹೊಳಿ (ಸಮಾಜ ಕಲ್ಯಾಣ ಸಚಿವರು) –

ಅ) ಒಟ್ಟು 13 ವಿದ್ಯಾರ್ಥಿನಿಲಯಗಳಿರುತ್ತದೆ

ಆ) 1 ಸಮಾಜ ಕಲ್ಯಾಣ ಇಲಾಖೆ –

5 ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯಗಳು ಮತ್ತು 1 ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಇರುತ್ತದೆ

2 ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ –

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಶಿರಹಟ್ಟಿ ತಾಲ್ಲೂಕು ಹೆಬ್ಬಾಳ ಗ್ರಾಮದಲ್ಲಿ ಒಂದು ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಇರುತ್ತದೆ ಸದರಿ ವಿದ್ಯಾರ್ಥಿನಿಲಯ 2007-08ನೇ ಸಾಲಿನಲ್ಲಿ ಮಂಜೂರಾಗಿರುತ್ತದೆ

3 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ –

4 ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯಗಳು, 1 ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಮತ್ತು 1 ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಇರುತ್ತದೆ

ಇ) 1 ಸಮಾಜ ಕಲ್ಯಾಣ ಇಲಾಖೆವತಿಯಿಂದ ಇರುವ ಪ್ರತಿ ವಿದ್ಯಾರ್ಥಿನಿಲಯಕ್ಕೆ ಮಂಜೂರಾದ ಪ್ರವೇಶ ಸಂಖ್ಯೆ ಈ ಕೆಳಕಂಡಂತಿದೆ

ಅ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ (ಶಿರಹಟ್ಟಿ) ಮಂಜೂರಾತಿ ಸಂಖ್ಯೆ 100

ಆ) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯದ (ಶಿರಹಟ್ಟಿ) ಮಂಜೂರಾತಿ ಸಂಖ್ಯೆ 75

ಇ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ (ಕಡಕೋಳ) ಮಂಜೂರಾತಿ ಸಂಖ್ಯೆ 75

ಈ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ (ಬನ್ನಿಕೊಪ್ಪ) ಮಂಜೂರಾತಿ ಸಂಖ್ಯೆ 50

ಉ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ (ಬಾಳೆಹೊಸೂರು) ಮಂಜೂರಾತಿ ಸಂಖ್ಯೆ 65

ಊ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದ (ಸೊರಣಗಿ) ಮಂಜೂರಾತಿ ಸಂಖ್ಯೆ 65

2. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇರುವ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ : 50

3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಇರುವ ಪ್ರತಿ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳ ಮಂಜೂರಾತಿ ಸಂಖ್ಯೆ : 50

ಈ) ಸಮಾಜ ಕಲ್ಯಾಣ ಇಲಾಖೆ :–

ಸಮಾಜ ಕಲ್ಯಾಣ ಇಲಾಖಾವತಿಯಿಂದ ಇರುವ ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಕೋರಿ ಬಂದ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿದೆ :–

ಅ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಶಿರಹಟ್ಟಿ) 42

ಆ) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ (ಶಿರಹಟ್ಟಿ) 43

ಇ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಕಡಕೋಳ) 51

ಈ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಬನ್ನಿಕೊಪ್ಪ) 17

ಉ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಬಾಳೆ ಹೊಸೂರು)17

ಊ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ (ಸೂರಣಗಿ) 18

2. ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ :–

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾವತಿಯಿಂದ ಶಿರಹಟ್ಟಿ ತಾಲ್ಲೂಕು ಹೆಬ್ಬಾಳ ಗ್ರಾಮದಲ್ಲಿ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಕೋರಿ ಬಂದ ವಿದ್ಯಾರ್ಥಿಗಳ ಸಂಖ್ಯೆ 40

3. ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ಪ್ರವೇಶ ಕೋರಿ ಬಂದ ವಿದ್ಯಾರ್ಥಿಗಳ ಸಂಖ್ಯೆ ಈ ಕೆಳಕಂಡಂತಿದೆ :–

ಅ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ (ಶಿರಹಟ್ಟಿ) 72

ಆ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ (ಯಾರಡಿ) 79

ಇ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ (ಲಕ್ಕೇಶ್ವರ) 66

ಈ) ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿ ನಿಲಯ (ಬೆಳ್ಳಟ್ಟಿ) 110

ಉ) ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ
(ಶಿರಹಟ್ಟಿ) (ಪರಿವರ್ತಿತ) 70

ಊ) ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯ,
(ಲಕ್ಕೇಶ್ವರ) 90

ಉ) ಹೌದು,

ಊ) 2006–07ನೇ ಸಾಲಿನಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿನ ಮೂಲಭೂತ ಸೌಲಭ್ಯಗಳನ್ನು ಪರಿಗಣಿಸಿ ಪ್ರತಿ ವಿದ್ಯಾರ್ಥಿ ನಿಲಯಕ್ಕೆ 10 ರಿಂದ 15 ಸಂಖ್ಯೆ ಮೀರದಂತೆ ಸಂಖ್ಯಾಬಲವನ್ನು ಹೆಚ್ಚಿಸಿ ಕ್ರಮ ಕೈಗೊಂಡಿದೆ.